For more job news visit : www.kpscvaani.com

ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಅರ್ಜಿ ಆಹ್ವಾನ

ರಾಮನಗರ: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಜಿಲ್ಲೆಯ ತಾಲೂಕುಗಳ ಸಮಗ್ರ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿಯಿರುವ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಹುದ್ದೆಗಳನ್ನು ಗೌರವ ಸೇವೆಯ ಆಧಾರದ ಮೇಲೆ ಭರ್ತಿ ಮಾಡಲು ಅರ್ಹ ಮಹಿಳಾ ಮತ್ತು ಲಿಂಗತ್ವ ಅಲ್ಪಸಂಖ್ಯಾತರಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ. ಕನಕಪುರ ತಾಲೂಕಿನಲ್ಲಿ ಕಾರ್ಯಕರ್ತೆಯರು-30, ಸಹಾಯಕಿಯರು-35, ಚನ್ನಪಟ್ಟಣ ತಾಲೂಕಿನಲ್ಲಿ ಕಾರ್ಯಕರ್ತೆಯರು-14, ಸಹಾಯಕಿಯರು-29, ಮಾಗಡಿ ತಾಲೂಕಿನಲ್ಲಿ ಕಾರ್ಯಕರ್ತೆಯರು-17, ಸಹಾಯಕಿಯರು-35, ರಾಮನಗರ ತಾಲೂಕಿನಲ್ಲಿ ಕಾರ್ಯಕರ್ತೆಯರು-11, ಸಹಾಯಕಿಯರು-21, ಹಾರೋಹಳ್ಳಿ ಕಾರ್ಯಕರ್ತೆಯರು-8, ಸಹಾಯಕಿಯರು-16 ಹುದ್ದೆಗಳಂತೆ ರಾಮನಗರ ಜಿಲ್ಲೆಯಲ್ಲಿ ಒಟ್ಟು 80 ಕಾರ್ಯಕರ್ತೆ ಹಾಗೂ 137 ಸಹಾಯಕಿ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಸ್ಥಳೀಯರು ಅರ್ಜಿಯನ್ನು ಅಗತ್ಯ ದಾಖಲಾತಿಗಳೊಂದಿಗೆ ಸೆಪ್ಟೆಂಬರ್30ರ ಸಂಜೆ 5.30ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಇಲಾಖಾ ವೆಬ್‌ಸೈಟ್ ಹಾಗೂ ಸಂಬಂಧಪಟ್ಟ ತಾಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳನ್ನು ಸಂಪರ್ಕಿಸುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

For more job news visit : www.kpscvaani.com

ಅರ್ಜಿ ಆಹ್ವಾನ

ಬಂಟ್ವಾಳ: ದ.ಕ.ಜಿಲ್ಲೆಯ ಬಂಟ್ವಾಳ ಶಿಶು ಅಭಿವೃದ್ಧಿ ಯೋಜನೆಯಲ್ಲಿ ಖಾಲಿಯಿರುವ ಒಟ್ಟು 19 ಅಂಗನವಾಡಿ ಕಾರ್ಯಕರ್ತೆಯರ ಹುದ್ದೆಗಳಿಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಕಾವಳಮೂಡೂರಿನ ಕಾವಳಕಟ್ಟೆ ಖಾಲಿ. ಮೂಡನಡುಗೋಡಿನ ಸಾಸ್ತಾನ, ಬಿ.ಮೂಡ ಗ್ರಾಮದ ಕೊಡಂಗೆ, ಸಜೀಪಮೂಡ ಗ್ರಾಮದ ಪಣೋಲಿಬೈಲ್, ಅಮ್ಮಾಜಿ ಗ್ರಾಮದ ಪೊರೆಮ್ಯಾ, ಸಜೀಪಮುನ್ನೂರು ಕೋಟಿಕಣಿ ಸಮಾಜಮಂದಿರ, ಸಜೀಪನಡು ಗ್ರಾಮದ ಗ್ರಾಮದ ಲಕ್ಷ್ಮಣಕಟ್ಟೆ, ಪುದು ಗ್ರಾಮದ ನಿತ್ಯಗಿರಿ ಅಂಗನವಾಡಿ ಕೇಂದ್ರಗಳಿಗೆ ಕಾರ್ಯಕರ್ತೆ ಮತ್ತು ಸಹಾಯಕಿಯರ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದ್ದು, ಸೆ.19 ಅರ್ಜಿ ಸಲ್ಲಿಕೆಗೆ ಕೊನೆ ದಿನವಾಗಿದೆ. ಮಾಹಿತಿಗೆ ಬಂಟ್ವಾಳ ಶಿಶು ಅಭಿವೃದ್ಧಿ ಇಲಾಖೆ ಯನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

For more job news visit : www.kpscvaani.com

ಅಂಗನವಾಡಿಗೆ ಅರ್ಹ ಮಹಿಳೆಯರಿಂದ ಅರ್ಜಿ

ಕೆ.ಆರ್.ಪೇಟೆ: ತಾಲೂಕಿನ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಖಾಲಿ ಇರುವ 6 ಅಂಗನವಾಡಿ ಕಾರ್ಯಕರ್ತೆ ಹುದ್ದೆ, 3 ಮಿನಿ ಅಂಗನವಾಡಿ ಕಾರ್ಯಕರ್ತೆ ಹಾಗೂ 43 ಅಂಗನವಾಡಿ ಸಹಾಯಕಿಯರ ಹುದ್ದೆಗಳಿಗೆ ಅರ್ಹ ಸ್ಥಳೀಯ ಮಹಿಳೆಯರು ಹಾಗೂ ಲಿಂಗತ್ವ ಅಲ್ಪಸಂಖ್ಯಾತ ಮಹಿಳೆಯರಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಸೆ.20ರ ಸಂಜೆ 5.30 ರೊಳಗೆ ಆನ್ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದು. ಹೆಚ್ಚಿನ ವಿವರಗಳಿಗೆ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ಸುಭಾಷನಗರ, ಮಿನಿವಿಧಾನ ಸೌಧದ ಹತ್ತಿರ, ಕೆ.ಆರ್.ಪೇಟೆ. ದೂ-08230-262627 ಸಂಪರ್ಕಿಸಬಹುದು ಎಂದು ಸಿಡಿಪಿಓ ಅರುಣಕುಮಾರ್ತಿಳಿಸಿದ್ದಾರೆ.

For more job news visit : www.kpscvaani.com

ಅಂಗನವಾಡಿ ಕಾರ್ಯಕರ್ತೆ ಸಹಾಯಕಿಯರ ಹುದ್ದೆಗೆ ಅರ್ಹರಿಂದ ಅರ್ಜಿ ಆಹ್ವಾನ

ರಾಯಚೂರು ಆ 31 – ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಿಲ್ಲೆಯ ಮಾನವಿ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಖಾಲಿ ಇರುವ ಅಂಗನವಾಡಿ ಕೇಂದ್ರಗಳಿಗೆ ಅಂಗನವಾಡಿ ಕಾರ್ಯಕರ್ತೆ-20 ಮತ್ತು ಸಹಾಯಕಿಯರು-54 ಹುದ್ದೆಗಳನ್ನು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಮಾನವಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ತಿಳಿಸಿದ್ದಾರೆ.

ಆಸಕ್ತರು ಇಲಾಖೆಯ ವೆಬ್‌ಸೈಟ್: https://karnemakaone.kar.nic.in/abcd/ ನಲ್ಲಿ ಇದೇ 2024ರ ಸೆ.29ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮಾನವಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯವನ್ನು ಕಚೇರಿಯ ಸಮಯದಲ್ಲಿ ಸಂಪರ್ಡಿಸುವಂತೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಹುದ್ದೆಗೆ ಅರ್ಜಿ ಆಹ್ವಾನ

ಲಿಂಗಸಗೂರು ಆ 31 – ತಾಲೂಕಿನ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಲಿಂಗಸುಗೂರು ಶಿಶು ಅಭಿವೃದ್ಧಿ. ಯೋಜನಾ ವ್ಯಾಪ್ತಿಯಲ್ಲಿ ಖಾಲಿ ಇರುವ ಅಂಗನವಾಡಿ ಕೇಂದ್ರಗಳಿಗೆ ಅಂಗನವಾಡಿ ಕಾರ್ಯಕರ್ತೆಯರ-18 ಮತ್ತು ಸಹಾಯಕಿಯರ-51 ಹುದ್ದೆಗಳನ್ನು ಆನ್‌ಲೈನ್ ವೆಬ್‌ಸೈಟ್ ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಇಚ್ಚಿಸುವವರು https://karnemakaone.kar.nic.in/abcd/ ವೆಬ್ ಸೈಟ್‌ನಲ್ಲಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ದಿನಾಂಕ : 30-08-2024 ರಿಂದ 29-09-2024 ರೊಳಗಾಗಿ ಸಲ್ಲಿಸಲು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಲಿಂಗಸುಗೂರು ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯ ಲಿಂಗಸುಗೂರು ರವರನ್ನು ಸಂಪರ್ಕಿಸಬಹುದಾಗಿದೆ.